Joint Director Building Licence Cell
N.R. Square
Bengaluru
No. 77
Date 13-02-2020
BBMP

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ಕಟ್ಟಡ ಪರವಾನಗಿ ಕೋಶ– ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002

ಸಂಖ್ಯೆ: BBMP/Addl.Dir/JD NORTH/ LP/0181/2017-18

ದಿನಾಂಕ: 11–02–2020

13-02-2020

## ಪ್ರಾರಂಭಿಕ ಪ್ರಮಾಣಪತ್ರ (ಭಾಗಶಃ)

ವಿಷಯ: ಆಸ್ತಿ ಖಾತಾ ಸಂಖ್ಯೆ 2067/104/1ಬಿ, (ಸರ್ವೆ ನಂ. 104/1ಬಿ, 104/4, 104/6, 104/7), ದೊಡ್ಡಕನ್ನಹಳ್ಳಿ ಗ್ರಾಮ, ವರ್ತೂರು ಹೋಬಳಿ, ಬೆಂಗಳೂರ ಪೂರ್ವ ತಾಲ್ಲೂಕು, ವಾರ್ಡ್ ಸಂಖ್ಯೆ: 150, ಮಹದೇವಪುರ ವಲಯ, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ಕ್ಲಬ್‌ಹೌಸ್ ಕಟ್ಟಡವನ್ನು ಹೊರತುಪಡಿಸಿ ಬ್ಲಾಕ್ – 1 ಮತ್ತು 2 ರ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JD NORTH/ LP/0181/2017-18 ದಿನಾಂಕ: 14–02–2019.

2) ತಮ್ಮ ಮನವಿ ಪತ್ರ ದಿನಾಂಕ: 04–11–2019.

* * * * * * *

ಆಸ್ತಿ ಖಾತಾ ಸಂಖ್ಯೆ 2067/104/1ಬಿ, (ಸರ್ವೆ ನಂ. 104/1ಬಿ, 104/4, 104/6, 104/7), ದೊಡ್ಡಕನ್ನಹಳ್ಳಿ ಗ್ರಾಮ, ವರ್ತೂರು ಹೋಬಳಿ, ಬೆಂಗಳೂರ ಪೂರ್ವ ತಾಲ್ಲೂಕು, ವಾರ್ಡ್ ಸಂಖ್ಯೆ: 150, ಮಹದೇವಪುರ ವಲಯ, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ಸಾಮಾನ್ಯ ತಳ ಅಂತಸ್ತುನ್ನೊಳಗೊಂಡಂತೆ ನೆಲ + ಮೇಲಿನ 13 ಅಂತಸ್ತುಗಳ ಬ್ಲಾಕ್ – 1 ಮತ್ತು ನೆಲ + ಮೇಲಿನ 14 ಅಂತಸ್ತುಗಳ ಬ್ಲಾಕ್ – 2 ಗಳಲ್ಲಿ 387 ಘಟಕಗಳು ಮತ್ತು 40 EWS ಘಟಕಗಳು ಸೇರಿದಂತೆ ಒಟ್ಟಾರೆ 427 ಘಟಕಗಳುಳ್ಳ ವಸತಿ ಸಮುಚ್ಚಯ ಮತ್ತು ನೆಲ + ಮೇಲಿನ 1 ಅಂತಸ್ತಿನ ಕ್ಲಬ್‌ಹೌಸ್ ಕಟ್ಟಡ ನಿರ್ಮಿಸಲು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಸಂಖ್ಯೆ: ಬೆಂಅಪ್ರಾ/ನಯೋಸ/ಡಿಎಲ್‌ಪಿ–14/2015–16/387/2018–19 ದಿನಾಂಕ: 29–05–2018 ರಂದು ಮಾರ್ಪಡಿತ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆಯನ್ನು ಪಡೆದುಕೊಂಡಿದ್ದು, ಅದರಂತೆ ಈ ಕಛೇರಿಯಿಂದ ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JDNorth/LP/0181/2017-18 ರಂತೆ ದಿನಾಂಕ: 14–02–2019 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಪ್ರಸ್ತುತ ಸದರಿ ಕ್ಲಬ್‌ಹೌಸ್ ಕಟ್ಟಡವನ್ನು ಹೊರತುಪಡಿಸಿ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (2) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಸದರಿ ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ನಡುಜಾಗಗಳನ್ನು ಬಿಟ್ಟು ಕಟ್ಟಡದ ನಿರ್ಮಾಣ ಮಾಡುತ್ತಿರುವುದನ್ನು ಗಮನಿಸಲಾಗಿರುತ್ತದೆ.

ಅಪರ ನಿರ್ದೇಶಕರು (ಕಟ್ಟಡ ಪರವಾನಗಿ ಕೋಶ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 24–01–2020 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಸಂಬಂಧ ಶುಲ್ಕ ರೂ. 3,17,000/– ಗಳಿಗೆ ಡಿ.ಡಿಯನ್ನು ಸಲ್ಲಿಸಿ ಈ ಕಛೇರಿಯ ರಶೀದಿ ಸಂಖ್ಯೆ: RE-ifms 331-TP/000576, ದಿನಾಂಕ: 06–02–2020 ರಂದು ಸಂದಾಯ ಮಾಡಿರುವುದರಿಂದ ಕ್ಲಬ್‌ಹೌಸ್ ಕಟ್ಟಡವನ್ನು ಹೊರತುಪಡಿಸಿ ಬ್ಲಾಕ್ – 1 ಮತ್ತು 2 ರ ವಸತಿ ಸಮುಚ್ಚಯ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

**ಷರತ್ತುಗಳು**

1) ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2) ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ–ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಯಾವುದೇ ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.

3) ನಕ್ಷೆ ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.

4) ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.

5) ನಿವೇಶನದ ಖಾತಾ ವಿಭಜನೆ, ದಾಖಲಾತಿಗಳನ್ನು / ಸ್ವತ್ತಿನ ಹಕ್ಕನ್ನು ಬದಲಾಯಿಸಿದಲ್ಲಿ ಮತ್ತು ಯಾವುದೇ ರೀತಿ ದಾಖಲಾತಿಗಳನ್ನು ಅಥವಾ ವಾಸ್ತವಾಂಶ ಮರೆಮಾಚಿದಲ್ಲಿ ಅರ್ಜಿದಾರರು ನೇರ ಹೊಣೆಯಾಗಿರುತ್ತಾರೆ ಮತ್ತು ನೀಡಲಾದ ಕಟ್ಟಡ ನಕ್ಷೆ ಮಂಜೂರಾತಿಯು ತನ್ನಿಂದತಾನೇ ರದ್ದುಗೊಳ್ಳುತ್ತದೆ.

6) ವಿವಿಧ ಇಲಾಖೆಗಳಿಂದ ಪಡೆದಿರುವ ನಿರಾಕ್ಷೇಪಣಾ ಪತ್ರಗಳಲ್ಲಿ ವಿಧಿಸಿರುವ ಷರತ್ತುಗಳನ್ನು ಪಾಲಿಸತಕ್ಕದ್ದು

7) ಕಟ್ಟಡಕ್ಕೆ ಸ್ವಾಧೀನಾನುಭವ ಪ್ರಮಾಣಪತ್ರ ಪಡೆಯುವ ಸಮಯದಲ್ಲಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಪಡೆದಿರುವ ನಿರಾಕ್ಷೇಪಣಾ ಪತ್ರವನ್ನು ಸಲ್ಲಿಸುವುದು.

8) ಮಂಜೂರಾತಿ ನಕ್ಷೆಯನ್ವಯ ಕ್ಲಬ್‌ಹೌಸ್ ಕಟ್ಟಡದ ಕಾಮಗಾರಿಯನ್ನು ಪ್ರಾರಂಭಿಸಿ, ಪಾಲಿಕೆಯಿಂದ ಪ್ರಾರಂಭಿಕ ಪ್ರಮಾಣಪತ್ರ ಪಡೆಯತಕ್ಕದ್ದು.

9) ಅರ್ಜಿದಾರರು/ಮಾಲೀಕರು/ಡೆವಲಪರ್‌ಗಳು ಕಟ್ಟಡ ನಿರ್ಮಾಣ ಮತ್ತು ಕಟ್ಟಡ ತೆರವಿನ ತ್ಯಾಜ್ಯದ ನಿರ್ವಹಣೆ ಮತ್ತು ವಿಲೇವಾರಿಯನ್ನು ಮಾಡಲು ಘನತ್ಯಾಜ್ಯ ನಿರ್ವಹಣೆ (ಎಸ್.ಡಬ್ಲ್ಯೂ.ಎಂ) ಉಪನಿಯಮ 2016 ಕ್ಕೆ ಬದ್ಧವಾಗಿರತಕ್ಕದ್ದು.

10) ಅರ್ಜಿದಾರರು/ಮಾಲೀಕರು/ಡೆವಲಪರ್‌ಗಳು ವಿದ್ಯುತ್ ಚಾಲಿತ ವಾಹನಗಳ ಚಾರ್ಜಿಂಗ್ ಪಾಯಿಂಟ್‌ಗಳನ್ನು ಅಳವಡಿಸಲು ಅಗತ್ಯ ಕ್ರಮವಹಿಸುವುದು.

11) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಸಂಸ್ಕರಿಸಿದ (Treated Water Utilisation for Construction) ನೀರನ್ನು ಕಟ್ಟಡ ನಿರ್ಮಾಣ ಕಾರ್ಯಕ್ಕೆ ಕಡ್ಡಾಯವಾಗಿ ಬಳಸಿಕೊಳ್ಳುವುದು.

12) ಅರ್ಜಿದಾರರು/ಮಾಲೀಕರು/ಡೆವಲಪರ್‌ಗಳು ಪ್ರತಿ 240.00 ಚ.ಮೀ ಅನುಪಾತ ವಿಸ್ತೀರ್ಣಕ್ಕೆ ಒಂದರಂತೆ ಗಿಡವನ್ನು ನೆಡುವುದು.

13/02/2020

ಜಂಟಿ ನಿರ್ದೇಶಕರು (ಕಟ್ಟಡ ಪರವಾನಗಿ ಕೋಶ – ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

11/02/2020 11/02 12/2

ಗೆ,

ಶ್ರೀ.ರಘುನಾಥರೆಡ್ಡಿ ಎಂ ಮತ್ತು ಮೆ॥ ಮೇದ ಕನ್‌ಸ್ಟ್ರಕ್ಷನ್ಸ್ ಖಾತಾದಾರರು
ಶ್ರೀ.ಎಂ.ನಿಶಾಂತ್ ಜಿ.ಪಿ.ಎ.ದಾರರು,
ಮೇದ ಹೈಟ್ಸ್ ಸರ್ವೆ ನಂ. 104/1ಬಿ, 104/4, 104/6, 104/7,
ದೊಡ್ಡಕನ್ನಹಳ್ಳಿ ಗ್ರಾಮ, ವರ್ತೂರು ಹೋಬಳಿ,
ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ಸಂಖ್ಯೆ: 150,
ಮಹದೇವಪುರ ವಲಯ, ಬೆಂಗಳೂರು.